**<u>ಗೌರವಾನ್ವಿತ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಅರಕಲಗೂಡು.</u>**

**ಅಪರಾಧ ಪ್ರಕರಣ ಸಂಖ್ಯೆಃ 751/2021**

| | | |
|---|---|---|
| **ಸಾಕ್ಷಿಯ ಹೆಸರು** | ರಂಗೇಗೌಡ | ಚಾಸಾ-8 |
| **ಉದ್ಯೋಗ** | ಎ.ಎಸ್.ಐ, ಹೊಳೆನರಸೀಪುರ ಗ್ರಾಮಾಂತರ ಪೊಲೀಸ್ ಠಾಣೆ | ಪ್ರಾಸಾ-8 |
| **ವಾಸ ಸ್ಥಳ** | ಅರಕಲಗೂಡು | |
| **ದಿನಾಂಕಃ 21.02.2025** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು. | | |

**<u>ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದ.</u>**

ನಾನು ಜೂನ್ 2016 ರಿಂದ ಜೂನ್ 2022 ರವರೆಗೆ ಅರಕಲಗೂಡು ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ಮಾಡಿರುತ್ತೇನೆ.

ದಿನಾಂಕ 20.04.2021 ರಂದು ನಾನು ಠಣಾ ಎಸ್ ಹೆಚ್ ಓ ಕರ್ತವ್ಯದಲ್ಲಿದ್ದಾಗ ಪಿರ್ಯಾದಿಯು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದು ಠಾಣಾ ಮೊಕದ್ದಮ್ಮೆ 112/2021 , ಕಲಂ 323, 504, 354 , 324 , 506 ಐಪಿಸಿ ರಡಿ ರೆಡ್ ವಿತ್ 34 ಐಪಿಸಿ ರಡಿಯಲ್ಲಿ ಪ್ರಕರಣ ದಾಖಲಿಸಿ ಮಾನ್ಯ ನ್ಯಾಯಾಲಯಕ್ಕೆ ಪ್ರ ವ ವ ವನ್ನು ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಮದ್ಯಾಹ್ನ ಕೃತ್ಯ ಸ್ಥಳಕ್ಕೆ ಬೇಟಿ ನೀಡಿ ಮಧ್ಯಾಹ್ನ 3.00 ರಿಂದ 3.45 ಗಂಟೆಯವರೆಗೆ ಕೃತ್ಯ ಸ್ಥಳ ಮಹಜರ್ ಮಾಡಿ, ಕೃತ್ಯ ಸ್ಥಳದಲ್ಲಿ ಒಂದು ಕಬ್ಬಿಣದ ರಾಡ್, ಒಂದು ಮರದ ದೊಣ್ಣೆ, ಒಂದು ಕಲ್ಲು ಅಮಾನತುಪಡಿಸಿಕೊಂಡು ನ್ಯಾಯಾಲಯದ ಅನುಮತಿಗಾಗಿ ಸ್ವತ್ತಿನ ಪಟ್ಟಿ ಸಂಖ್ಯೆಯಲ್ಲಿ ನಮೂದಿಸಿಕೊಂಡು ನ್ಯಾಯಾಲಯದ ಅನುಮತಿ ಪಡೆದುಕೊಂಡಿರುತ್ತೇನೆ. ಅದೇ ದಿನ ನಾಗರಾಜು , ಜಯಮ್ಮ , ರೇಖಾ , ಅಣ್ಣಪ್ಪ , ಧರ್ಮ ರವರ ಹೇಳಿಕೆಯನ್ನು ದಾಖಲಿಸಿರುತ್ತೇನೆ. ನಂತರ ದಿನಾಂಕ 05.06.2021 ರಂದು ಗಾಯಾಳುಗಳಾದ ನಾಗರಾಜು , ಜಯಮ್ಮ , ರೇಖಾ ರವರ ಗಾಯದ ದೃಡೀಕರಣ ಪತ್ರವನ್ನು ಪಡೆದಿರುತ್ತೇನೆ. ನಂತರ ಈ ಪ್ರಕರಣದಲ್ಲಿ ತನಿಖೆ ಮುಗಿದಿದ್ದರಿಂದ ದಿನಾಂಕ 07.06.2021 ರಂದು ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

1) ನಿಪಿ 1 ರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ1(ಬಿ) ಎಂದು ಗುರುತಿಸಲಾಯಿತು.

2) ದಿನಾಂಕ 20.04.2021 ರಂದು ದಾಖಲಿಸಿದ ಪ್ರ ವ ವ ವನ್ನು ನಿಪಿ 7 ಎಂದು ಮತ್ತು ಸದರಿ ಸಾಕ್ಷಿಯ ಸಹಿಯನ್ನು ನಿಪಿ 7(ಎ) ಎಂದು ಗುರುತಿಸಲಾಯಿತು.

3) ನಿಪಿ 2 ರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿದ್ದು ನಿಪಿ 2(ಡಿ) ಎಂದು ಗುರುತಿಸಲಾಯಿತು.

ನ್ಯಾಯಾಲಯದ ಎಂ ಓ1 ,2, 3 ನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ. ನಿಪಿ 4 , 5, 6 ರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ4(ಬಿ) , ನಿಪಿ5(ಬಿ), ನಿಪಿ6(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಆರೋಪಿ ಪರ ಶ್ರೀ ಜಿ.ಡಿ.ಎಂ ವಕೀಲರಿಂದಃ**

ಕೃತ್ಯ ನಡೆದ 5 ದಿನಗಳ ನಂತರ ದೂರನ್ನು ನೀಡಿರುತ್ತಾರೆ. ದೂರನ್ನು ನೀಡಲು ಬಂದ ಪಿರ್ಯಾಯೊಂದಿಗೆ ಯಾರು ಬಂದಿದ್ದರು ಎಂಬುದು ನನಗೆ ತಿಳಿದಿರುವುದಿಲ್ಲ. ನಿಪಿ 1 ರಲ್ಲಿರುವ ದೂರನ್ನು ಯಾರು ಬರೆದಿರುತ್ತಾರೆ ಎಂಬುದು ನನಗೆ ತಿಳಿದಿರುವುದಿಲ್ಲ ಎಂದರೆ ಸರಿ. ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವ ಸಮಯದಲ್ಲಿ ಆಸ್ಪತ್ರೆಗೆ ನಾನು ಬೇಟಿ ನೀಡಿರುವುದಿಲ್ಲ. ಪ್ರ ವ ವವನ್ನು ದಾಖಲಿಸುವ ಮುಂಚಿತವಾಗಿ ಕೃತ್ಯ ಸ್ಥಳಕ್ಕೆ ನಾನು ಬೇಟಿ ನೀಡಿರುವುದಿಲ್ಲ. ದೂರನ್ನು ಮಧ್ಯಾಹ್ನ 1.00 ಗಂಟೆ ಸಮಯದಲ್ಲಿ ನೀಡಿರುತ್ತಾರೆ. ಕೃತ್ಯ ಸ್ಥಳ ಮಹಜರ್ ಮಾಡುವ ಸಮಯಲ್ಲಿ ಅಲ್ಲಿ ಪಿರ್ಯಾದಿಯಾದ ನಾಗರಾಜು, ಅಣ್ಣಪ್ಪ, ಸವಿತಾರವರುಗಳು ಇದ್ದರು. ಸಾಕ್ಷಿ ಮುಂದುವರೆದು ಇನ್ನೂ ಬೇರೆ ಜನರು ಇದ್ದರು ಎಂದು ನುಡಿಯುತ್ತಾರೆ. ಆ ಸಮಯದಲ್ಲಿ ಅಲ್ಲಿ ಬೇರೆ 5 ರಿಂದ 6 ಜನರು ಸಹ ಇದ್ದರು. ಪಂಚರಿಗೆ ಕೃತ್ಯ ಸ್ಥಳ ಮಹಜರ್ ನಲ್ಲಿ ಸಹಿ ಹಾಕಲು ಕೋರಿ ನಾನು ನೋಟೀಸನ್ನು ನೀಡಿರುವುದಿಲ್ಲ ಆದರೆ ಮೌಖಿಕವಾಗಿ ಕೇಳಿರುತ್ತೇನೆ. ಕೃತ್ಯ ಸ್ಥಳದ ಅಕ್ಕಪಕ್ಕದಲ್ಲಿ ಮನೆಗಳು ಇರುತ್ತವೆ. ಸದರಿ ಮನೆಗಳು ಯಾರಿಗೆ ಸೇರಿದ್ದು ಎಂಬುದು ನನಗೆ ತಿಳಿದಿರುವುದಿಲ್ಲ. ಆ ದಿನ ಯಾವುದೇ ಘಟನೆ ನಡೆ ರುವುದಿಲ್ಲ ಮತ್ತು ನಾನು ಕೃತ್ಯ ಸ್ಥಳಕ್ಕೆ ಹೋಗಿರುವುದಿಲ್ಲ, ಮಹಜರ್ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಆ ದಿನ ನಾನು ಮುದ್ದೆಮಾಲುಗಳನ್ನು ವಶಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಯನ್ನು ನಾನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ನಾನು ವೈದ್ಯರಿಂದ ಯಾವುದೇ ಗಾಯದ ಪ್ರಮಾಣಪತ್ರಗಳನ್ನು ಪಡೆದಿರುವುದಿಲ್ಲ. ಎಂ ಓ1 ರಿಂದ 3 ರಲ್ಲಿರುವ ವಸ್ತುಳು ಸಾಮಾನ್ಯವಾಗಿ ರಸ್ತೆಯಲ್ಲಿ ಸಿಗುತ್ತವೆ ಎಂದರೆ ಸರಿ. ಆರೋಪಿಗಳಿಗೂ ಎಂ.ಓ1 ರಿಂದ 3 ರಲ್ಲಿರುವ ವಸ್ತುಗಳಿಗೂ ಯಾವುದೇ ಸಂಬಂದ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಕೃತ್ಯ ನಡೆದ ಸ್ಥಳಕ್ಕೆ ಹೋಗಿರುವುದಿಲ್ಲ ಠಾಣೆಯಲ್ಲಿ ಕುಳಿತು ಮಹಜರ್ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗಳು ಯಾವುದೇ ತಪ್ಪು ಮಾಡದಿದ್ದರೂ ಅವರ ವಿರುದ್ದ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಸುಳ್ಳು ದೂರನ್ನು ಸ್ವೀಕರಿಸಿ ಸುಳ್ಳು ಪ್ರಕರಣವನ್ನು ಅರೋಪಿಗಳ ವಿರುದ್ದ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ. ಸರಿಯಿದೆ.

**ಸಿವಿಲ್ ಮತ್ತು ಜೆ.ಎಂ.ಎಫ್.ಸಿ.ನ್ಯಾಯಾಧೀಶರು.**
**ಅರಕಲಗೂಡು**